ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಪರಿಷತ್ತು

ಪತ್ರಿಕೆಯ ಹೆಸರು : NAME OF THE NEWS PAPER: ಉದಯ ವಾಣಿ

ದಿನಾಂಕ : DATE : 7/2/20

# ಅನಿಲ್‌ಕುಮಾರ್ ಪಕ್ಷೇತರ ಅಭ್ಯರ್ಥಿ

**ಬೆಂಗಳೂರು:** ರಾಜ್ಯ ವಿಧಾನಸಭೆಯಿಂದ ವಿಧಾನ ಪರಿಷತ್‌ನ ಒಂದು ಸ್ಥಾನಕ್ಕೆ ನಡೆಯಲಿರುವ ಚುನಾವಣೆಗೆ ಕಾಂಗ್ರೆಸ್-ಜೆಡಿಎಸ್ ಬೆಂಬಲಿತ ಪಕ್ಷೇತರ ಅಭ್ಯರ್ಥಿಯಾಗಿ ಅನಿಲ್‌ಕುಮಾರ್ ಗುರುವಾರ ನಾಮ ಪತ್ರ ಸಲ್ಲಿಸಿದ್ದಾರೆ. ಮೊದಲಿಗೆ ಜೆಡಿಎಸ್‌ನಿಂದ ನಗರ ಘಟಕದ ಅಧ್ಯಕ್ಷ ಆರ್.ಪ್ರಕಾಶ್ ನಾಮಪತ್ರ ಸಲ್ಲಿಸಲು ತೀರ್ಮಾನಿಸಲಾಗಿತ್ತಾದರೂ ನಂತರ ಅನಿಲ್ ಕುಮಾರ್‌ಗೆ ಬೆಂಬಲ ವ್ಯಕ್ತಪಡಿಸಲು ನಿರ್ಧರಿಸಲಾಯಿತು. ಮೂಲತಃ ಕಾಂಗ್ರೆಸ್ ಮುಖಂಡರಾದ ಅನಿಲ್‌ಕುಮಾರ್ ಮಾಜಿ ಸಚಿವ ಎಚ್.ಡಿ.ರೇವಣ್ಣ, ಮಾಜಿ ಶಾಸಕ ಕೋನರೆಡ್ಡಿ, ವಿಧಾನಪರಿಷತ್ ಸದಸ್ಯ ತಿಪ್ಪೇಸ್ವಾಮಿ ಅವರೊಂದಿಗೆ ಚುನಾವಣಾಧಿಕಾರಿ ವಿಶಾಲಾಕ್ಷಿ ಅವರಿಗೆ ಪಕ್ಷೇತರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಎಚ್.ಡಿ.ರೇವಣ್ಣ, ಸಮಾನ ಮನಸ್ಕರು ಸೇರಿ ಅನಿಲ್ ಕುಮಾರ್ ಅವರನ್ನು ಅಭ್ಯರ್ಥಿಯನ್ನಾಗಿಸಿದ್ದೇವೆ, ಪಕ್ಷದ ನಾಯಕರ ಜತೆ ಚರ್ಚಿಸಿಯೇ ನಿರ್ಧಾರ ಕೈಗೊಂಡಿದ್ದೇವೆ ಎಂದರು.